**ಕರ್ನಾಟಕ ಸರ್ಕಾರ**

**ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾಚುನಾವಣಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ನಗರ ಜಿಲ್ಲೆ**

**ಕಂದಾಯ ಭವನ ಹಿಂಭಾಗ, ಕೆ.ಜಿ. ರಸ್ತೆ, ಬೆಂಗಳೂರು–560 009.**

Telephone : 080-22240614. Fax : 080-22211106 Email:deo.bangaloreu @gmail.com

ಸಂಖ್ಯೆ:ಚುನಾ(ಮ.ಪ.ಪ)/ಸಿಆರ್/16/2023–24. ದಿನಾಂಕ: 27.10.2023

ಗೆ,

ಮುಖ್ಯ ಆಯುಕ್ತರು,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು,
ಎನ್.ಆರ್. ಚೌಕ, ಬೆಂಗಳೂರು–560 002.

ಮಾನ್ಯರೇ,

**ವಿಷಯ:–** ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ–2024 ಕ್ಕೆ ಸಂಬಂಧಿಸಿದಂತೆ ಕರಡು ಮತದಾರರ ಪಟ್ಟಿ ಹಾಗೂ ಸೇವಾ ಮತದಾರರ ಪಟ್ಟಿಯನ್ನು ಪ್ರಕಟಿಸಿರುವ ಬಗ್ಗೆ.

**ಉಲ್ಲೇಖ:–**

1. ಭಾರತ ಚುನಾವಣಾ ಆಯೋಗ ಪತ್ರ ಸಂಖ್ಯೆ: 23/2023–ERS(Vol-III), ದಿನಾಂಕ: 25–09–2023.
2. ಬೆಂಗಳೂರು ನಗರ ಜಿಲ್ಲೆಯ 07 ವಿಧಾನಸಭಾ ಕ್ಷೇತ್ರಗಳ ಮತದಾರರ ನೊಂದಣಾಧಿಕಾರಿರವರುಗಳ ವರದಿ ದಿನಾಂಕ: 27–10–2023.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಗೆ ಸೇರಿದ 150–ಯಲಹಂಕ, 152–ಬ್ಯಾಟರಾಯನಪುರ, 153–ಯಶವಂತಪುರ, 155–ದಾಸರಹಳ್ಳಿ, 174–ಮಹದೇವಪುರ, 176–ಬೆಂಗಳೂರು ದಕ್ಷಿಣ ಹಾಗೂ 177–ಆನೇಕಲ್ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಸಿದಂತೆ ಮತದಾರರ ಪಟ್ಟಿಯ ಅರ್ಹತಾ ದಿನಾಂಕ: 01–01–2024 ಕ್ಕೆ ಅನ್ವಯವಾಗುವಂತೆ ಕರಡು ಮತದಾರರ ಪಟ್ಟಿ ಹಾಗೂ ಸೇವಾ ಮತದಾರರ ಪಟ್ಟಿಯನ್ನು ಮತದಾರರ ನೊಂದಣಿ ನಿಯಮಗಳು 1960 ರ ನಿಯಮ 10 ರಲ್ಲಿ ತಿಳಿಸಿರುವಂತೆ ನಮೂನೆ–05 ರಲ್ಲಿ ಬೆಂಗಳೂರು ನಗರ ಜಿಲ್ಲೆಯ 07 ವಿಧಾನಸಭಾ ಕ್ಷೇತ್ರಗಳ ಮತದಾರರ ನೊಂದಣಾಧಿಕಾರಿ ಕಛೇರಿ, ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಛೇರಿ, ಸಂಬಂಧಪಟ್ಟ ಕಛೇರಿಗಳಲ್ಲಿ ಹಾಗೂ ಪ್ರಮುಖ ಸ್ಥಳಗಳಲ್ಲಿ ಸಾರ್ವಜನಿಕ ಮಾಹಿತಿಗಾಗಿ ಪ್ರಚುರ ಪಡಿಸಲಾಗಿರುತ್ತದೆ ಎಂಬ ಮಾಹಿತಿಯನ್ನು ಉಲ್ಲೇಖ (2) ರಂತೆ ಬೆಂಗಳೂರು ನಗರ ಜಿಲ್ಲೆಯ 07 ವಿಧಾನಸಭಾ ಕ್ಷೇತ್ರಗಳ ಮತದಾರರ ನೊಂದಣಾಧಿಕಾರಿಗಳು ಈ ಕಛೇರಿಗೆ ವರದಿಯನ್ನು ಸಲ್ಲಿಸಿರುತ್ತಾರೆ.

ಅದರಂತೆ, ಬೆಂಗಳೂರು ನಗರ ಜಿಲ್ಲೆಯ 07 ವಿಧಾನಸಭಾ ಕ್ಷೇತ್ರಗಳ ಮತದಾರರ ನೊಂದಣಾಧಿಕಾರಿರವರುಗಳು ಸಲ್ಲಿಸಿರುವ ನಮೂನೆ–05 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಟ್ಟು ತಮ್ಮ ಅವಗಾಹನೆಗೆ ಸಲ್ಲಿಸಿದೆ.

ತಮ್ಮ ವಿಶ್ವಾಸಿ

ಅಪರ ಜಿಲ್ಲಾ ಚುನಾವಣಾಧಿಕಾರಿ
ಹಾಗೂ ಜಿಲ್ಲಾಧಿಕಾರಿ,
ಬೆಂಗಳೂರು ನಗರ ಜಿಲ್ಲೆ.

ಪ್ರತಿಯನ್ನು:–

ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.